Scanned

# ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಹಿಪ್ಪರಗಿ ಆಣೆಕಟ್ಟು ಯೋಜನೆಯಡಿ ಐನಾಪೂರ ಏತ ನೀರಾವರಿ ಯೋಜನೆಯ 2ನೇ ಹಂತದ ಪೂರ್ವ ಕಾಲುವೆಯ ವಿತರಣಾ ಕಾಲುವೆ 13 ಮತ್ತು ಮೈನರ್ ನಂ.1 ರ ನಿರ್ಮಾಣ ಕುರಿತು ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಮದಭಾವಿ ಗ್ರಾಮದ ಜಮೀನು ಭೂಸ್ವಾಧೀನತೆಯ ಪುನರ್‌ವಸತಿ ಮತ್ತು ಪುನರ್‌ವ್ಯವಸೆ ಅಧಿನಿಯಮ-2013 ರನ್ವಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1)ರ ಕ್ರಮಾಂಕ:ಎಲ್‌ಎಕ್ಯೂ:ಜಿ.ಎಸ್‌ಆರ್:02:2016-17 ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ:ಭೂಸ್ವಾ:ಹಿಯೋ:ಸಿಆರ್-03/2016-17 ದಿನಾಂಕ:11-07-2016. ಹಾಗೂ ಕಲಂ 11(1)ರ ಅಧಿಸೂಚನೆ ಗೆಜೆಟ್ ಪ್ರಕಟಣೆಗೊಂಡ ದಿನಾಂಕ: 04-08-2016.

2} ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ಈ ಕಾರ್ಯಾಲಯದ ಅವಧಿ ವಿಸ್ತರಣೆ ಪತ್ರ ಸಂಖ್ಯೆ:ಕಂಇ:ಭೂಸ್ವಾ-5(2):ಸಿಆರ್-144/16-17/2004 ದಿನಾಂಕ: 22-08-2017.

4} ವಿಶೇಷ ಜಿಲ್ಲಾಧಿಕಾರಿ,ಭೂಸ್ವಾಧಿನ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು. ಬೆಳಗಾವಿ ಇವರ ಪತ್ರ ಸಂಖ್ಯೆ: ಭೂಸ್ವಾ: ಹಿಯೋ:ಸಿಆರ್-03/2016-17 ದಿನಾಂಕ20-07-2017.

*******

ಆದೇಶ ಸಂ:ಕಂಇ:ಭೂಸ್ವಾ-5(2):ಸಿಆರ್:144:2016-17/271 ದಿನಾಂಕ: 01-09-2017.

ವಿಶೇಷ ಜಿಲ್ಲಾಧಿಕಾರಿ,ಭೂಸ್ವಾಧಿನ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು. ಬೆಳಗಾವಿ ಇವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ ಹಿಪ್ಪರಗಿ ಆಣೆಕಟ್ಟು ಯೋಜನೆಯಡಿ ಐನಾಪೂರ ಏತ ನೀರಾವರಿ ಯೋಜನೆಯ 2ನೇ ಹಂತದ ಪೂರ್ವ ಕಾಲುವೆಯ ವಿತರಣಾ ಕಾಲುವೆ 13 ಮತ್ತು ಮೈನರ್ ನಂ.1 ರ ನಿರ್ಮಾಣ ಕುರಿತು ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಮದಭಾವಿ ಗ್ರಾಮದ ಜಮೀನು ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನಿನ ಭೂಮಾಲೀಕರಿಗೆ ಜೆ.ಎಂ.ಸಿ. ಪ್ರಕಾರ ಒಟ್ಟು: 02ಎ-17ಗುಂ ಕ್ಷೇತ್ರಕ್ಕೆ ನೂತನ ಕಾಯ್ದೆ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿ, ಹಿಪ್ಪರಗಿ ಆಣೆಕಟ್ಟು ಯೋಜನೆ, ಆಥಣಿ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಪ್ರಕರಣ ಅಸ್ತಿತ್ವದಲ್ಲಿರುವ ಸಂದರ್ಭಗಳು ನ್ಯಾಯಯುತ ಅಭಿಪ್ರಾಯ ಹೊಂದಿರುವದರಿಂದ ಉಲ್ಲೇಖ (3)ರಡಿ ಕಾಯ್ದೆ ಕಲಂ 19(7)ರಡಿ ಅಂತಿಮ ಅಧಿಸೂಚನೆ ಕಾಲಾವಧಿಯನ್ನು ವಿಸ್ತರಿಸಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು,

....2)

ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಜೆ.ಎಂ.ಸಿ. ಪ್ರಕಾರ ಒಟ್ಟು ಕ್ಷೇತ್ರ: 02ಎ–17ಗುಂ. ಕ್ಷೇತ್ರದಲ್ಲಿ ಜಮೀನು ಸ್ವಾಧೀನಕ್ಕೆ ಒಳಪಡುತ್ತಿದ್ದು, ಈ ಪೈಕಿ ಒಟ್ಟು ಎಂಟು (08) ಕುಟುಂಬಗಳು ಬಾಧಿತಗೊಳ್ಳುತ್ತಿದ್ದು, ಪ್ರಸ್ತುತ ನೂತನ ಭೂಸ್ವಾಧೀನ ಕಾಯ್ದೆ ಅನುಸಾರ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾದ ಕ್ಷೇತ್ರವನ್ನು ಪರಿಗಣಿಸಿ ಯಾವುದೇ ಕುಟುಂಬವು ಅವರು ಹೊಂದಿದ ಕ್ಷೇತ್ರಕ್ಕಿಂತ ಬಹುಪಾಲು ಭೂಮಿಯನ್ನು ಕಳೆದುಕೊಳ್ಳುವುದಿಲ್ಲ ಹಾಗೂ ಜೀವನೋಪಾಯ ನಷ್ಟತೆಯನ್ನು ಹೊಂದುವುದಿಲ್ಲ ಎಂಬುದರ ಬಗ್ಗೆ ವಿಶೇಷ ಜಿಲ್ಲಾಧಿಕಾರಿ,ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು. ಬೆಳಗಾವಿ ರವರು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಯೋಜನೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿದ್ದಾರೆ.

ವಿಶೇಷ ಜಿಲ್ಲಾಧಿಕಾರಿ, ಭೂಸ್ವಾಧಿನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು. ಬೆಳಗಾವಿ ಇವರು ಶಿಫಾರಸ್ಸು ಮಾಡಿರುವ ಯಾದಿಯನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕಾಯ್ದೆ ಕಲಂ 41(6)ರಡಿ ಅನುಸೂಚಿತ ಪಂಗಡ ಹಾಗೂ ಬುಡಕಟ್ಟು ಜನಾಂಗಗಳಿಗೆ ಭೂಸ್ವಾಧೀನ ಪ್ರಕರಣಗಳು ಒಳಪಟ್ಟಿದ್ದಲ್ಲಿ ಸ್ವಾಧೀನದ ಸ್ವತ್ತುಗಳ ಶೇಕಡಾ 1/3 ರಷ್ಟು ಪರಿಹಾರಧನವನ್ನು ಸ್ವಾಧೀನ ಪೂರ್ವದಲ್ಲಿ ಬಾಧಿತ ಕುಟುಂಬಗಳಿಗೆ ಪಾವತಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

01/3/17

ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ,
ನವನಗರ, ಬಾಗಲಕೋಟ.

ಇವರಿಗೆ:

1) ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ವಿಶೇಷ ಜಿಲ್ಲಾಧಿಕಾರಿ, ಭೂಸ್ವಾಧೀನ, ಪುನರವಸತಿ ಮತ್ತು ಪುನರನಿರ್ಮಾಣ,ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
3) ಉಪ ವಿಭಾಗಾಧಿಕಾರಿ, ಚಿಕ್ಕೋಡಿ ಉಪ–ವಿಭಾಗ, ಚಿಕ್ಕೋಡಿ ಇವರಿಗೆ ಮಾಹಿತಿಗಾಗಿ.
4) ವಿಶೇಷ ಭೂಸ್ವಾಧೀನಾಧಿಕಾರಿ, ಹಿಪ್ಪರಗಿ ಆಣೆಕಟ್ಟು ಯೋಜನೆ,ಅಥಣಿ ಇವರಿಗೆ ಸಂಬಂಧಪಟ್ಟ ಕಡತದೊಂದಿಗೆ ಸೂಕ್ತ ಕ್ರಮಕ್ಕಾಗಿ ಹಿಂದಿರುಗಿಸಲಾಗಿದೆ.
5) ತಹಶೀಲ್ದಾರರು, ಅಥಣಿ ಇವರಿಗೆ ಮಾಹಿತಿಗಾಗಿ.
6) ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತ, ಮದಭಾವಿ ತಾಲೂಕ ಅಥಣಿ ಇವರಿಗೆ.
7) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ, ಕಂಪ್ಯೂಟರ ವಿಭಾಗ, ಪು ಮತ್ತು ಪು. ಕೃಮೇ.ಯೋ. ನವನಗರ, ಬಾಗಲಕೋಟ ಇವರಿಗೆ.